# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಡಾ॥ ಸಿ.ಆರ್ ಮನೋಹರ್
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1023
ಉತ್ತರಿಸಬೇಕಾದ ದಿನಾಂಕ : 29.09.2020

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಎಷ್ಟು ಸಹಕಾರಿ ಸಂಘಗಳಿವೆ; (ತಾಲ್ಲೂಕುವಾರು ವಿವರ ನೀಡುವುದು) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕ್ರಮವಾಗಿ 1574 ಮತ್ತು 1549 ಸಹಕಾರಿ ಸಂಘಗಳಿವೆ, ತಾಲ್ಲೂಕುವಾರು ವಿವರವನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| (ಆ) | ಅವುಗಳಲ್ಲಿ ಎಷ್ಟು ಸಹಕಾರಿ ಸಂಘಗಳು ಸರ್ಕಾರದಿಂದ ನೋಂದಣಿಯಾಗದೆ ನಡೆಯುತ್ತಿವೆ; (ತಾಲ್ಲೂಕುವಾರು ವಿವರ ನೀಡುವುದು) | ಇಲಾಖೆಯಿಂದ ನೋಂದಣಿಯಾಗದೆ ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘಗಳು ಇರುವುದಿಲ್ಲ. |
| (ಇ) | ಸಹಕಾರಿ ಸಂಘಗಳ ಪುನಃಶ್ಚೇತನಕ್ಕೆ ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳೇನು; | 1) ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು, ಪಿಕಾರ್ಡ್ ಬ್ಯಾಂಕ್‌ಗಳು ಹಾಗೂ ಪ್ಯಾಕ್ಸ್‌ಗಳ ಪುನಃಶ್ಚೇತನಕ್ಕೆ ಸಂಬಂಧಿಸಿದಂತೆ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.<br>• ದಿನಾಂಕ: 31-01-2020 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಹಾಗೂ ಧೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಕಂತುಗಳ ಅಸಲನ್ನು ದಿ:30.06.2020 ರೊಳಗಾಗಿ ರೈತರು ಪೂರ್ತಿಯಾಗಿ ಮರುಪಾವತಿಸಿದಲ್ಲಿ, ಈ ಮೊತ್ತಗಳಿಗೆ ಮರುಪಾವತಿ ದಿನಾಂಕದವರೆಗಿನ ಬಾಕಿ ಇರುವ ಬಡ್ಡಿಯನ್ನು ಮನ್ನಾ ಮಾಡಲಾಗಿದೆ.<br>• ದುರ್ಬಲ ಡಿ.ಸಿ.ಸಿ ಬ್ಯಾಂಕುಗಳು ನಬಾರ್ಡ್ ಪುನರ್ಧನ ಪಡೆಯಲು ಅರ್ಹವಿಲ್ಲದೇ ಇದ್ದಲ್ಲಿ ಅಪೆಕ್ಸ್ ಬ್ಯಾಂಕಿನಿಂದ ಸಾಲ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>2) ಮಲಪ್ರಭಾ ಸಹಕಾರಿ ಎಣ್ಣೆ ಗಿರಣಿ ನಿ., ನರಗುಂದ ಈ ಸಂಘದ ಪುನಃಶ್ಚೇತನಕ್ಕಾಗಿ 2019-20ನೇ ಸಾಲಿನಲ್ಲಿ ರೂ.2.00 ಕೋಟಿ ಅನುದಾನ ಬಿಡುಗಡೆ ಮಾಡಿದೆ ಹಾಗೂ 2020-21 ನೇ ಸಾಲಿನಲ್ಲಿ ರೂ.6.60 ಕೋಟಿಗಳ ಅನುದಾನ ಕಲ್ಪಿಸಿದ್ದು, ಇಲ್ಲಿಯವರೆಗೆ ರೂ.2.00 ಕೋಟಿಗಳನ್ನು ಬಿಡುಗಡೆ ಮಾಡಿದೆ. |
| (ಈ) | ಸಹಕಾರಿ ಸಂಘಗಳಿಂದ ರೈತರು ಸಾಲವನ್ನು ಪಡೆಯಲು ಇರುವ ಮಾನದಂಡಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ➢ **ಕುಟುಂಬಕ್ಕೆ ರೂ.3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ಮತ್ತು ಪಶುಸಂಗೋಪನೆ/ ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದ ಸಾಲದ ಯೋಜನೆ.**<br>• ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ತಾವು ವಾಸಿಸುವ ವ್ಯಾಪ್ತಿಯ ಸಹಕಾರ ಸಂಘಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು.<br>• ಆಧಾರ್ ಕಾರ್ಡ್, ಪಡಿತರ ಚೀಟಿ ಮತ್ತು ಆರ್‌ಟಿಸಿ ದಾಖಲೆಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು. ಸದರಿ ಆರ್‌ಟಿಸಿ ಮೇಲೆ ಇತರ ಬ್ಯಾಂಕುಗಳಲ್ಲಿ ಬೆಳೆ ಸಾಲ ಪಡೆದಿರಬಾರದು. |

| | | |
|---|---|---|
| | | • ರೈತನು ರೂ.20,000/-ಗಳ ವೇತನ/ಪಿಂಚಣಿ ಪಡೆಯುತ್ತಿಲ್ಲ ಅಥವಾ ಆದಾಯತೆರಿಗೆ ಪಾವತಿದಾರರಾಗಿಲ್ಲ ಎಂಬ ಬಗ್ಗೆ ದೃಢೀಕರಣ ನೀಡತಕ್ಕದ್ದು.<br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮರುಪಾವತಿಸಬೇಕು.<br><br>➢ **<u>ಕುಟುಂಬಕ್ಕೆ ರೂ.10.00 ಲಕ್ಷಗಳವರೆಗೆ ಮಧ್ಯಮಾವಧಿ/ ದೀರ್ಘಾವಧಿ ಸಾಲಗಳನ್ನು ಶೇಕಡ 3 ರ ಬಡ್ಡಿದರದಲ್ಲಿ ವಿತರಿಸುವ ಯೋಜನೆ.</u>**<br>• ರೈತನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ತಾವು ವಾಸಿಸುವ ವ್ಯಾಪ್ತಿಯ ಸಹಕಾರ ಸಂಘಗಳಲ್ಲಿ ಸದಸ್ಯತ್ವ ಹೊಂದಿರತಕ್ಕದ್ದು.<br>• ಭೂಮಿ ದಾಖಲೆಗಳು, ಭದ್ರತೆಗೆ ಬೇಕಾದ ದಾಖಲೆಗಳು ಮತ್ತು ಯೋಜನಾ ವರದಿಯೊಂದಿಗೆ ನಿಗಧಿತ ನಮೂನೆಯಲ್ಲಿ ಸಂಬಂಧಿಸಿದ ಸಂಘಗಳಿಗೆ ಅರ್ಜಿ ಸಲ್ಲಿಸಬೇಕು.<br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮತ್ತು ಶೇ.3 ರ ಬಡ್ಡಿಯನ್ನು ಪಾವತಿಸಬೇಕು. |

**ಸಂಖ್ಯೆ: ಸಿಒ 363 ಸಿಸಿಬಿ 2020**

**(ಎಸ್.ಟಿ. ಸೋಮಶೇಖರ್)**
**ಸಹಕಾರ ಸಚಿವರು**